# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

## ವಾರ್ಡ್ –145ರ ವಾರ್ಡ್ ಸಭೆಯ ನಡವಳಿ

ಚಿಕ್ಕಪೇಟೆ ವಿಧಾನಸಭಾ ಕ್ಷೇತ್ರದ ಹೊಂಬೇಗೌಡನಗರ ವಾರ್ಡ್–145 ರಲ್ಲಿ ವಾರ್ಡ್ ಸಭೆಯನ್ನು ಮಾನ್ಯ ಶ್ರೀಮತಿ. ಲಕ್ಷ್ಮೀದೇವಿ ಆರ್. ಉಪ ಆಯುಕ್ತರು ಕಂದಾಯ (ದಕ್ಷಿಣ), ನೋಡಲ್ ಅಧಿಕಾರಿ ಹಾಗೂ ವಾರ್ಡ್ ಸಮಿತಿ ಅಧ್ಯಕ್ಷರ ಅಪ್ಪಣೆ ಮೇರೆಗೆ ದಿನಾಂಕ:18/09/2021 ರಂದು ಶನಿವಾರ ಮಧ್ಯಾಹ್ನ 3.00 ಗಂಟೆಗೆ ವಾರ್ಡ್ ಕಮಿಟ ಸಭೆಯನ್ನು ಕರೆಯಲಾಗಿದ್ದು, ವಾರ್ಡ್ ವ್ಯಾಪ್ತಿಯಲ್ಲಿನ ಕುಂದು ಕೊರತೆಗಳ ಬಗ್ಗೆ ಚರ್ಚಿಸಲು ಸದಸ್ಯರಿಗೆ ಆಹ್ವಾನ ನೀಡಿದ್ದು, ಸಭೆಗೆ ಹಾಜರಾಗಿರುವ ಎಲ್ಲರಿಗೂ ಸ್ವಾಗತ ಕೋರುತ್ತಾ, ವಾರ್ಡ್ ಸಮಿತಿ ಸಭೆಯ ಅಧ್ಯಕ್ಷರಾದ ಸನ್ಮಾನ್ಯ ಶ್ರೀಮತಿ. ಲಕ್ಷ್ಮೀದೇವಿ ರವರ ಅಧ್ಯಕ್ಷತೆಯೊಂದಿಗೆ ಸಭೆಯನ್ನು ನಡೆಸಲಾಯಿತು.

**ಹಾಜರಿದ್ದವರು:–**

1. ಉಪ ಆಯುಕ್ತರು (ದಕ್ಷಿಣ) ಹಾಗೂ ವಾರ್ಡ್ 145ರ ನೋಡಲ್ ಅಧಿಕಾರಿ.
2. ಕೆಲಸ ಪರಿವೀಕ್ಷಕರು ವಾರ್ಡ್–145
3. ಕಿರಿಯ ಇಂಜಿನಿಯರ್ (ವಿದ್ಯುತ್)
4. ಕಿರಿಯ ಇಂಜಿನಿಯರ್ (ಬೆಸ್ಕಾಂ)
5. ಪೊಲೀಸ್ ಇಲಾಖೆ ಅಧಿಕಾರಿಗಳು (ಕಾನೂನು ಸುವ್ಯವಸ್ಥೆ) ಆಡುಗೋಡಿ.
6. ತೋಟಗಾರಿಕೆ ಇಲಾಖೆ, ಬಿಬಿಎಂಪಿ ಅಧಿಕಾರಿಗಳು ವಾರ್ಡ್ 145
7. ಕಿರಿಯ ಆರೋಗ್ಯ ಪರಿವೀಕ್ಷಕರು, ವಾರ್ಡ್–145.
8. ನಾಗರೀಕ ಕಲ್ಯಾಣ ಸಂಘದ ಸದಸ್ಯರು ಮತ್ತು ಸಾರ್ವಜನಿಕರು.

**ಸಭೆಗೆ ಗೈರು ಹಾಜರಾದ ಇಲಾಖೆಗಳು:–**

1. ವಿಲ್ಸನ್‌ಗಾರ್ಡನ್ ಪೊಲೀಸ್ ಠಾಣೆ ಕಾನೂನು ಸುವ್ಯವಸ್ಥೆ ಮತ್ತು ಸಂಚಾರ ವಾರ್ಡ್ 145.
2. ಬೆಂಗಳೂರು ನೀರು ಸರಬರಾಜು ಮತ್ತು ಒಳಚರಂಡಿ ಮಂಡಳಿ ಇಲಾಖೆಯ ಅಧಿಕಾರಿಗಳು.

**********

1. ವಾರ್ಡ್ ವ್ಯಾಪ್ತಿಯ ವಿಲ್ಸನ್‌ಗಾರ್ಡನ್ ಅಸೋಸಿಯೇಷನ್ ರವರು ಮಾತನಾಡಿ ಆನೆ ಪಾರ್ಕ್‌ನಲ್ಲಿ ಕತ್ತರಿಸಿ ಹಾಕಲಾಗಿರುವ ಮರದ ರೆಂಬೆ–ಕೊಂಬೆಗಳನ್ನು ತೆರವುಗೊಳಿಸಲು ಕೋರಿದರು. ತೋಟಗಾರಿಕೆ ಇಲಾಖೆಯ ಕೆಲಸ ಪರಿವೀಕ್ಷಕರು ಕ್ರಮ ವಹಿಸುವುದಾಗಿ ತಿಳಿಸಿದರು.



Scanned with CamScanner

2. ವಾರ್ಡ್‌ನ ವಿಲ್ಸನ್‌ಗಾರ್ಡನ್ ಅಸೋಸಿಯೇಷನ್ ರವರು ಮಾತನಾಡಿ ಆನೆ ಪಾರ್ಕಿನ ಮುಂಭಾಗದಲ್ಲಿ ಅನಧಿಕೃತವಾಗಿ ವಾಹನಗಳನ್ನು ನಿಲ್ಲಿಸಿರುವ ಬಗ್ಗೆ ದೂರಿದರು. ಈ ಬಗ್ಗೆ ಅಧ್ಯಕ್ಷರು ಮಾತನಾಡಿ ಸಂಬಂಧಪಟ್ಟ ಇಲಾಖೆಯವರಿಗೆ ಕ್ರಮ ವಹಿಸಲು ಸೂಚನೆ ನೀಡುವುದಾಗಿ ಸಭೆಗೆ ತಿಳಿಸಿದರು.

3. ವಾರ್ಡ್‌ನ ವಿಲ್ಸನ್‌ಗಾರ್ಡನ್ ಅಸೋಸಿಯೇಷನ್ ರವರು ಮಾತನಾಡಿ ಆನೆ ಪಾರ್ಕಿನ ಒಳಭಾಗದಲ್ಲಿ ವಿದ್ಯುತ್ ತಂತಿ ಕೆಳಭಾಗದಿಂದ ಸಂಪರ್ಕ ಕಲ್ಪಿಸಿದ್ದು, ಈ ಬಗ್ಗೆ ಕ್ರಮ ವಹಿಸಲು ಸಭೆಯಲ್ಲಿ ಕೋರಿದರು. ಈ ಬಗ್ಗೆ ಸಭೆಯಲ್ಲಿ ಹಾಜರಿದ್ದ ಕಿರಿಯ ಅಭಿಯಂತರರು, ವಿದ್ಯುತ್ (ದಕ್ಷಿಣ) ರವರು ಮಾತನಾಡಿ ಕ್ರಮ ವಹಿಸುವುದಾಗಿ ತಿಳಿಸಿದರು.

4. ವಿಲ್ಸನ್‌ಗಾರ್ಡನ್ ಅಸೋಸಿಯೇಷನ್ ರವರು ಮಾತನಾಡಿ ವಿಲ್ಸನ್‌ಗಾರ್ಡನ್ 9ನೇ ಮತ್ತು 11ನೇ ಅಡ್ಡರಸ್ತೆಯು ಹಾಳಾಗಿದ್ದು, ಆದಷ್ಟು ಬೇಗ ಸದರಿ ರಸ್ತೆಗಳನ್ನು ಸರಿಪಡಿಸುವಂತೆ ಕೋರಿದರು. ಈ ವಿಷಯವಾಗಿ ಅಧ್ಯಕ್ಷರು ಉತ್ತರಿಸಿ ಸೂಕ್ತ ಕ್ರಮ ವಹಿಸಲು ವಾರ್ಡಿನ ಅಭಿಯಂತರರಿಗೆ ಸೂಚಿಸುವುದಾಗಿ ಸಭೆಗೆ ತಿಳಿಸಿದರು.

5. ವಿಲ್ಸನ್‌ಗಾರ್ಡನ್ ಅಸೋಸಿಯೇಷನ್ ರವರು ಮಾತನಾಡಿ ವಿಲ್ಸನ್‌ಗಾರ್ಡನ್ 3ನೇ ಅಡ್ಡರಸ್ತೆಯಲ್ಲಿರುವ ಚರಂಡಿಯ ಮೇಲ್ಭಾಗದಲ್ಲಿ ಅಲ್ಲಲ್ಲಿ ಕಲ್ಲುಚಪ್ಪಡಿ ಇರುವುದಿಲ್ಲವೆಂದು ತಿಳಿಸಿದರು. ಈ ವಿಷಯವಾಗಿ ಅಧ್ಯಕ್ಷರು ಉತ್ತರಿಸಿ ಸೂಕ್ತ ಕ್ರಮ ವಹಿಸಲು ವಾರ್ಡಿನ ಅಭಿಯಂತರರಿಗೆ ಸೂಚಿಸುವುದಾಗಿ ಸಭೆಗೆ ತಿಳಿಸಿದರು.

ಮೇಲಿನ ಈ ಎಲ್ಲಾ ಚಟುವಟಿಕೆಗಳನ್ನು ಕ್ರಮಬದ್ಧವಾಗಿ ಸಂಬಂಧಪಟ್ಟ ಇಲಾಖಾವಾರು ಸಮನ್ವಯ ಸಾಧಿಸಿಕೊಂಡು ನಿರ್ವಹಿಸಲು ಎಲ್ಲಾ ಸಿಬ್ಬಂಧಿ ವರ್ಗದವರು ಒಂದುಗೂಡಿ ಈ ಕಾರ್ಯದಲ್ಲಿ ಪಾಲ್ಗೊಂಡು ಮಾನ್ಯ ಆಯುಕ್ತರು (ಬಿಬಿಎಂಪಿ) ರವರು ವಹಿಸಿರುವ ಜವಾಬ್ಧಾರಿಯನ್ನು ಯಶಸ್ವಿಯಾಗಿ ನಿರ್ವಹಿಸಲು ಎಲ್ಲರೂ ಸಹಕರಿಸಬೇಕೆಂದು ಹೇಳುತ್ತಾ ಸಭೆ ಮುಕ್ತಾಯಗೊಳಿಸಿದರು.

ಕಾರ್ಯದರ್ಶಿ & ಸಹಾಯಕ ಅಭಿಯಂತರರು
ವಾರ್ಡ್ ಸಂಖ್ಯೆ – 145
ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

ಅಧ್ಯಕ್ಷರು & ನೋಡಲ್ ಅಧಿಕಾರಿ
ವಾರ್ಡ್ ಸಂಖ್ಯೆ – 145
ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ



Scanned with CamScanner